Akashvani : Bangalore
National Bulletin In Kannada
26.04.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

******

ಮುಖ್ಯಾಂಶಗಳು :

- ದೇಶಾದ್ಯಂತ ಇಂದು ಉದ್ಯೋಗ ಮೇಳ ಆಯೋಜನೆ; ವರ್ಚುವಲ್ ಮೂಲಕ ೫೧ ಸಾವಿರ ನೇಮಕಾತಿ ಪತ್ರಗಳನ್ನು ವಿತರಿಸಲಿರುವ ಪ್ರಧಾನಿ ನರೇಂದ್ರ ಮೋದಿ
- ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ೧೯೬೦ರ ಸಿಂಧು ಜಲ ಒಪ್ಪಂದದ ಕುರಿತ ಉನ್ನತಮಟ್ಟದ ಸಭೆ
- ಇಟಲಿಯ ರೋಮ್‌ನಲ್ಲಿಂದು ಪೋಪ್ ಫ್ರ್ಯಾನ್ಸಿಸ್ ಅಂತ್ಯಕ್ರಿಯೆ; ಭಾರತದ ಪರವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ
- ಭಾರತ ಆಡಿಯೋ ಶೃಂಗಸಭೆ ಮತ್ತು ಪ್ರಶಸ್ತಿಗಳು ೨೦೨೫ರಲ್ಲಿ ವಿವಿಧ ವಿಭಾಗಗಳಲ್ಲಿ ಆರು ಪ್ರಶಸ್ತಿ ಗೆದ್ದ ಆಕಾಶವಾಣಿ
- ಸ್ಕ್ರ್ಯಾಮ್ ಜೆಟ್ ಅಭಿವೃದ್ಧಿಯಲ್ಲಿ ಡಿಆರ್‌ಡಿಒ ಮಹತ್ವದ ಮೈಲಿಗಲ್ಲು

**********

ಪ್ರಧಾನಿ ನರೇಂದ್ರ ಮೋದಿ ಇಂದು ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಕರಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಲಿದ್ದಾರೆ. ಇದೇ ವೇಳೆ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ನಿಟ್ಟಿನಲ್ಲಿ ೧೫ನೇ ಉದ್ಯೋಗ ಮೇಳವನ್ನು ದೇಶಾದ್ಯಂತ ೪೭ ಸ್ಥಳಗಳಲ್ಲಿ ಇಂದು ನಡೆಸಲಾಗುತ್ತಿದೆ. ಕರ್ನಾಟಕದ ಹುಬ್ಬಳ್ಳಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರದ ಯುವ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಸುಮಾರು ೫೦ ಉದ್ಯೋಗ ನಿಯುಕ್ತಿ ಪತ್ರ ವಿತರಿಸಲಿದ್ದಾರೆ. ಬೆಂಗಳೂರಿನ ಕ್ವೀನ್ಸ್ ರಸ್ತೆಯಲ್ಲಿರುವ ಕಾವೇರಿ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ.

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ನಿನ್ನೆ ನವದೆಹಲಿಯ ತಮ್ಮ ನಿವಾಸದಲ್ಲಿ ಪಾಕಿಸ್ತಾನದೊಂದಿಗಿನ ೧೯೬೦ರ ಸಿಂಧೂ ಜಲ ಒಪ್ಪಂದಕ್ಕೆ ಸಂಬಂಧಿಸಿದಂತೆ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಕೇಂದ್ರ ಜಲ ಶಕ್ತಿ ಸಚಿವ ಸಿ.ಆರ್. ಪಾಟೀಲ್ ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಜಲ ಶಕ್ತಿ ಸಚಿವರು, ಸಿಂಧೂ ಜಲ ಒಪ್ಪಂದದ ಕುರಿತು ಸರ್ಕಾರ ತೆಗೆದುಕೊಂಡ ಐತಿಹಾಸಿಕ ನಿರ್ಧಾರವು ಸಂಪೂರ್ಣವಾಗಿ ನ್ಯಾಯಯುತವಾಗಿದೆ ಮತ್ತು ರಾಷ್ಟ್ರೀಯ ಹಿತಾಸಕ್ತಿಯನ್ನು ಹೊಂದಿದೆ. ಸಿಂಧೂ ನದಿಯಿಂದ ಒಂದು ಹನಿ ನೀರು ಕೂಡ ಪಾಕಿಸ್ತಾನಕ್ಕೆ ತಲುಪದಂತೆ ಸರ್ಕಾರ ಖಚಿತಪಡಿಸುತ್ತದೆ ಎಂದು ಅವರು ಹೇಳಿದರು.

**********

ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಪಾಕಿಸ್ತಾನದ ಪ್ರಜೆಗಳಿಗೆ ನೀಡಲಾದ ವೀಸಾಗಳನ್ನು ರದ್ದುಗೊಳಿಸಿದ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ನಿನ್ನೆ ಎಲ್ಲಾ ರಾಜ್ಯದ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ, ಪಾಕ್ ಪ್ರಜೆಗಳು ಪಾಕಿಸ್ತಾನಕ್ಕೆ ಶೀಘ್ರವಾಗಿ ಮರಳುವುದನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ನಾಳೆಯಿಂದ ಜಾರಿಗೆ ಬರುವಂತೆ ದೀರ್ಘಾವಧಿಯ ವೀಸಾಗಳು, ರಾಜತಾಂತ್ರಿಕ ಮತ್ತು ಅಧಿಕೃತ ವೀಸಾಗಳನ್ನು ಹೊರತುಪಡಿಸಿ ಭಾರತದಿಂದ ಪಾಕಿಸ್ತಾನ ಪ್ರಜೆಗಳಿಗೆ ನೀಡಲಾಗಿದ್ದ ಎಲ್ಲಾ ವೀಸಾಗಳನ್ನು ರದ್ದುಗೊಳಿಸಲಾಗಿದೆ. ಪಾಕಿಸ್ತಾನ ಪ್ರಜೆಗಳಿಗೆ ನೀಡಲಾಗುವ ಎಲ್ಲಾ ವೈದ್ಯಕೀಯ ವೀಸಾಗಳು ಈ ತಿಂಗಳ ೨೯ ರವರೆಗೆ ಮಾತ್ರ ಮಾನ್ಯವಾಗಿರುತ್ತವೆ ಮತ್ತು ರದ್ದಾದ ವರ್ಗಗಳಲ್ಲಿ ಯಾವುದೇ ಹೊಸ ವೀಸಾಗಳನ್ನು ನೀಡಲಾಗುವುದಿಲ್ಲ.

**********

ತೆಲಂಗಾಣ ಪೊಲೀಸ್ ಮಹಾನಿರ್ದೇಶಕ ಡಾ. ಜಿತೇಂದರ್ ಅವರು ಪಾಕಿಸ್ತಾನದ ಪ್ರಜೆಗಳಿಗೆ ವೀಸಾ ಸೇವೆಗಳನ್ನು ತಕ್ಷಣ ಸ್ಥಗಿತಗೊಳಿಸುವ ಬಗ್ಗೆ ಕೇಂದ್ರ ಸರ್ಕಾರದ ಆದೇಶಗಳನ್ನು ಪ್ರಕಟಿಸಿ ಸೂಚನೆ ನೀಡಿದ್ದಾರೆ. ರಾಜ್ಯದಲ್ಲಿ ಒಟ್ಟು ೨೩೦ ಪಾಕಿಸ್ತಾನದ ಪ್ರಜೆಗಳು ಭಾರತೀಯ ವೀಸಾಗಳನ್ನು ಹೊಂದಿದ್ದಾರೆ. ಕಾನೂನು ಪರಿಣಾಮಗಳನ್ನು ತಪ್ಪಿಸಲು ಪ್ರಸ್ತುತ ರಾಜ್ಯದಲ್ಲಿ ವಾಸಿಸುತ್ತಿರುವ ಪಾಕಿಸ್ತಾನದ ನಾಗರಿಕರು ನವೀಕರಿಸಿದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ

ಪಾಲಿಸಬೇಕೆಂದು ಸೂಚಿಸಲಾಗಿದೆ. ಭಾರತದಿಂದ ನಿರ್ಗಮಿಸುವ ಪಾಕಿಸ್ತಾನಿ ಪ್ರಜೆಗಳಿಗೆ ಅಟ್ಟಾರಿ ಗಡಿ ಈ ತಿಂಗಳ ೩೦ ರವರೆಗೆ ತೆರೆದಿರುತ್ತದೆ.

**********

ಭಾರತಕ್ಕೆ ಭೇಟಿ ನೀಡಿದ ಒಟ್ಟು ೧೯೧ ಪಾಕಿಸ್ತಾನದ ಪ್ರಜೆಗಳು ನಿನ್ನೆ ಪಂಜಾಬ್‌ನ ಅಮೃತಸರದ ಅಟ್ಟಾರಿ-ವಾಘಾ ಮಾರ್ಗದ ಮೂಲಕ ಹಿಂತಿರುಗಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ದೇಶವನ್ನು ತೊರೆಯಲು ಕೇಂದ್ರವು ೪೮ ಗಂಟೆಗಳ ಗಡುವು ವಿಧಿಸಿದ ನಂತರ ಈ ಘಟನೆ ನಡೆದಿದೆ.ಇದಕ್ಕೂ ಮೊದಲು, ಈ ತಿಂಗಳ ೨೪ ರಂದು ೨೮ ಜನರು ಪಾಕಿಸ್ತಾನಕ್ಕೆ ಹಿಂತಿರುಗಿದ್ದಾರೆ. ಏತನ್ಮಧ್ಯೆ, ನೆರೆಯ ದೇಶಕ್ಕೆ ಭೇಟಿ ನೀಡುತ್ತಿದ್ದ ಒಟ್ಟು ೨೮೭ ಭಾರತೀಯ ಪ್ರಜೆಗಳು ಸಹ ಹಿಂತಿರುಗಿದ್ದಾರೆ.

**********

ಕ್ಯಾಥೋಲಿಕ್ ಚರ್ಚ್ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ರೋಮ್‌ನಲ್ಲಿರುವ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ನಡೆಯಲಿದೆ. ವ್ಯಾಟಿಕನ್ ನಗರದ ಸೇಂಟ್ ಪೀಟರ್ಸ್ ಚೌಕದಲ್ಲಿ ಭಾರತೀಯ ಕಾಲಮಾನ ಅಪರಾಹ್ನ ೧.೩೦ಕ್ಕೆ ಅಂತ್ಯಕ್ರಿಯೆ ಪ್ರಕ್ರಿಯೆ ಆರಂಭವಾಗಲಿದೆ. ಅಂತ್ಯಕ್ರಿಯೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಭಾರತ ಸರ್ಕಾರ ಮತ್ತು ಜನರ ಪರವಾಗಿ ಸಂತಾಪ ಸೂಚಿಸಲಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರಾನ್, ಬ್ರೆಜಿಲ್ ಅಧ್ಯಕ್ಷ ಲೂಯಿಸ್ ಇನಾಸಿಯೊ ಲೂಲಾ ಡಾಸಿಲ್ವಾ ಮತ್ತು ಅರ್ಜೆಂಟಿನಾ ಅಧ್ಯಕ್ಷ ಜೇವಿಯರ್ ಮಿಲಿ ಸೇರಿದಂತೆ ವಿವಿಧ ರಾಷ್ಟ್ರಗಳ ಅಧ್ಯಕ್ಷರು ಮತ್ತಿತರ ಗಣ್ಯರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಕಳೆದ ಒಂದು ಶತಮಾನದಲ್ಲಿ ವ್ಯಾಟಿಕನ್ ನಗರದ ಹೊರಗೆ ಪೋಪ್ ಒಬ್ಬರ ಅಂತ್ಯಕ್ರಿಯೆ ನಡೆಯುತ್ತಿರುವುದು ಇದೇ ಮೊದಲನೇ ಬಾರಿಯಾಗಿದೆ. ೧೯೦೩ರಲ್ಲಿ ಪೋಪ್ ೧೩ನೇ ಲಿಯೋ ಅಂತ್ಯ ಸಂಸ್ಕಾರ ವ್ಯಾಟಿಕನ್ ನಗರದ ಹೊರಗೆ ನಡೆದಿತ್ತು. ರಾಷ್ಟ್ರಪತಿ ದ್ರೌಪದಿ ಮುರ್ಮು, ನಿನ್ನೆ ಇಟಲಿಯ ರೋಮ್ ತಲುಪಿ, ವ್ಯಾಟಿಕನ್ ನಗರದ ಸೇಂಟ್ ಪೀಟರ್ ಬೆಸಿಲಿಕಾದಲ್ಲಿ ಪೋಪ್ ಫ್ರಾನ್ಸಿಸ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ಅವರೊಂದಿಗೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಅಲ್ಪಸಂಖ್ಯಾತ ವ್ಯವಹಾರಗಳ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾ ವಿಧಾನಸಭೆ ಉಪ ಸಭಾಧ್ಯಕ್ಷ ಜೋಶುವಾ ಡಿಸೋಜ ಇಟಲಿಗೆ ತೆರಳಿದ್ದಾರೆ. ಈಗಾಗಲೇ ಕೇಂದ್ರ ಸರ್ಕಾರ ಮೂರು ದಿನಗಳ ಶೋಕಾಚರಣೆ ಘೋಷಿಸಿದ್ದು, ಎರಡು ದಿನಗಳ ಶೋಕಾಚರಣೆ ಈ ತಿಂಗಳ ೨೨, ೨೩ರಂದು ನಡೆಸಲಾಗಿದ್ದು, ಅಂತ್ಯಕ್ರಿಯೆ ಹಿನ್ನೆಲೆ ಇಂದೂ ಕೂಡ ದೇಶಾದ್ಯಂತ ಶೋಕಾಚರಣೆ ಘೋಷಿಸಲಾಗಿದೆ.

**********

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಡಿಆರ್‌ಡಿಒ ಒಂದು ಸಾವಿರ ಸೆಕೆಂಡ್‌ಗಳಿಗೂ ಹೆಚ್ಚು ಕಾಲ ಸಕ್ರಿಯವಾಗಿ ತಂಪಾಗುವ ಸ್ಕ್ರ್ಯಾಮ್ ಜೆಟ್ ಸಬ್‌ಸ್ಕೇಲ್ ಕಂಬಸ್ಟರ್‌ನ ಯಶಸ್ವಿ ಪರೀಕ್ಷೆಯನ್ನು ನಡೆಸುವ ಮೂಲಕ ಸ್ಕ್ರ್ಯಾಮ್ ಜೆಟ್ ಅಭಿವೃದ್ಧಿಯಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಹೈದರಾಬಾದ್‌ನಲ್ಲಿ ಡಿಆರ್‌ಡಿಒ ಪ್ರಯೋಗಾಲಯದಲ್ಲಿ ನಿನ್ನೆ ಹೊಸದಾಗಿ ನಿರ್ಮಿಸಲಾದ ಅತ್ಯಾಧುನಿಕ ಸ್ಕ್ರ್ಯಾಮ್ ಜೆಟ್ ಕನೆಕ್ಟ್ ಪರೀಕ್ಷಾ ಸೌಲಭ್ಯದಲ್ಲಿ ಈ ಪರೀಕ್ಷೆ ನಡೆಸಲಾಗಿದೆ. ಇದೇ ಜನವರಿಯಲ್ಲಿ ನಡೆಸಲಾದ ಪರೀಕ್ಷೆಯಲ್ಲಿ ೧೨೦ ಸೆಕೆಂಡ್‌ಗಳು ದಾಖಲಾಗಿತ್ತು. ಈ ಯಶಸ್ವಿ ಪರೀಕ್ಷೆಯ ಬೆನ್ನಲ್ಲೇ ಈ ವ್ಯವಸ್ಥೆ ಶೀಘ್ರದಲ್ಲೇ ಪೂರ್ಣ ಪ್ರಮಾಣದ ಹಾರಾಟಕ್ಕೆ ಯೋಗ್ಯವಾದ ಕಂಬಸ್ಟರ್ ಪರೀಕ್ಷೆಗೆ ಸಿದ್ಧವಾಗಲಿದೆ. ಡಿಆರ್‌ಡಿಒದ ಈ ಸಾಧನೆಯನ್ನು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದಾರೆ. ಈ ಸಾಧನೆ ರಾಷ್ಟ್ರಕ್ಕಾಗಿ ನಿರ್ಣಾಯಕ ರಕ್ಷಣಾ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಸರ್ಕಾರದ ಬದ್ಧತೆಯ ಪ್ರತಿಬಿಂಬವಾಗಿದೆ ಎಂದಿದ್ದಾರೆ.

**********

ಭಾರತ ಆಡಿಯೋ ಶೃಂಗಸಭೆ ಮತ್ತು ಪ್ರಶಸ್ತಿಗಳು ೨೦೨೫ರಲ್ಲಿ ಆಕಾಶವಾಣಿ ವಿವಿಧ ವಿಭಾಗಗಳಲ್ಲಿ ಒಟ್ಟು ಆರು ಪ್ರಶಸ್ತಿಗಳನ್ನು ಗೆದ್ದಿದೆ. ರೇಡಿಯೋ ಮತ್ತು ಆಡಿಯೋ ವಿಷಯದಲ್ಲಿ ಶ್ರೇಷ್ಠತೆಯನ್ನು ಗುರುತಿಸುವ ಪ್ರಶಸ್ತಿಗಳ ಮೂರನೇ ಆವೃತ್ತಿಯನ್ನು ನಿನ್ನೆ ರಾತ್ರಿ ಮುಂಬೈನಲ್ಲಿ ನಡೆಸಲಾಯಿತು. ಆಕಾಶವಾಣಿಗೆ ದೊರೆತ ಅತ್ಯುನ್ನತ ಪ್ರಶಸ್ತಿಗಳಲ್ಲಿ, ಮಾಜಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರ 'ನಯಿ ಸೋಚ್ ನಯಿ ಕಹಾನಿ - ಎ ರೇಡಿಯೋ ಜರ್ನಿ ವಿತ್ ಸ್ಮೃತಿ ಇರಾನಿ' ಕಾರ್ಯಕ್ರಮವನ್ನು ರೇಡಿಯೊದಲ್ಲಿ ವರ್ಷದ ಸರಣಿ ಎಂದು ಹೆಸರಿಸಲಾಗಿದೆ. ೧೩ ಕಂತುಗಳ ಸರಣಿಯು ವಿಶೇಷವಾಗಿ ಮಹಿಳೆಯರ ಧೈರ್ಯ ಮತ್ತು ದೃಢಸಂಕಲ್ಪದ ಅದ್ಭುತ ಕಥೆಗಳನ್ನು ಆಚರಿಸಿತು. ಕಳೆದ ವರ್ಷ ರಾಷ್ಟ್ರಪತಿ ಭವನದಲ್ಲಿ ರೆಕಾರ್ಡ್ ಮಾಡಲಾದ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗಿನ ವಿಶೇಷ ಸಂದರ್ಶನದೊಂದಿಗೆ ಸರಣಿಯು ಮುಕ್ತಾಯವಾಯಿತು. ಸುದ್ದಿ ಸೇವಾ ವಿಭಾಗದ ಜನಪ್ರಿಯ ಸಾಪ್ತಾಹಿಕ ಫೋನ್-ಇನ್ ಕಾರ್ಯಕ್ರಮ ಪಬ್ಲಿಕ್ ಸ್ಪೀಕ್ ಅನ್ನು ಆರೋಗ್ಯ ಮತ್ತು ಫಿಟ್‌ನೆಸ್ ವಿಭಾಗದಲ್ಲಿ ಅತ್ಯುತ್ತಮ ನಿರ್ಮಿತ ಆಡಿಯೋ ಸ್ಟ್ರೀಮಿಂಗ್ ಕಾರ್ಯಕ್ರಮ ಎಂದು ಗುರುತಿಸಲಾಗಿದೆ. ಇತರ ಪ್ರಶಸ್ತಿ ವಿಜೇತ ಕಾರ್ಯಕ್ರಮಗಳಲ್ಲಿ 'ಛಾಯಾಗೀತ್  ಸೇರಿದೆ, ಇದು ಅತ್ಯುತ್ತಮ ಲೇಟ್ ನೈಟ್ ಶೋ ವಿಭಾಗದಲ್ಲಿ ಗೆದ್ದಿದೆ; 'ಉಜಲೆ ಉಂಕಿ ಯಾದೋಂ ಕೆ' ಅತ್ಯುತ್ತಮ ಸೆಲೆಬ್ರಿಟಿ ಶೋ ಆನ್ ಏರ್ ಪ್ರಶಸ್ತಿಯನ್ನು ಪಡೆದುಕೊಂಡಿತು; ಮತ್ತು 'ಸಫರ್‌ಕಾಸ್ಟ್' ಅತ್ಯುತ್ತಮ ಪ್ರಯಾಣ ಪ್ರದರ್ಶನ ಪ್ರಶಸ್ತಿಯನ್ನು ಪಡೆದುಕೊಂಡಿತು. ಕಿರು-

ರೂಪದ ಆಡಿಯೋ ವಿಷಯದಲ್ಲಿ ತಮ್ಮ ಸೃಜನಶೀಲ ಶ್ರೇಷ್ಠತೆಯನ್ನು ಪ್ರದರ್ಶಿಸುವ ಮೂಲಕ ಅತ್ಯುತ್ತಮ ಇಂಟರ್‌ಸ್ಟೀಷಿಯಲ್ ಪ್ರಶಸ್ತಿಯನ್ನು ಆಕಾಶವಾಣಿ ಪಡೆದುಕೊಂಡಿದೆ. ಸಭೆಯನ್ನುದ್ದೇಶಿಸಿ ಮಾತನಾಡಿದ ಆಕಾಶವಾಣಿಯ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಲಿವಾಲ್ ಗೌರ್, ಆಡಿಯೋ ಉದ್ಯಮದಲ್ಲಿನ ಕ್ರಾಂತಿಯನ್ನು ಮತ್ತು ಭಾರತದ ಸಾರ್ವಜನಿಕ ಸೇವಾ ಪ್ರಸಾರಕರಾಗಿ ಆಕಾಶವಾಣಿಯು ದೇಶದ ಜನರಿಗೆ 'ಮಾಹಿತಿ ನೀಡಿ, ಶಿಕ್ಷಣ ನೀಡಿ ಮತ್ತು ಮನರಂಜನೆ ನೀಡಿ' ಎಂಬ ತನ್ನ ಧ್ಯೇಯಕ್ಕೆ ಬದ್ಧವಾಗಿದೆ ಹಾಗೂ ಆಕಾಶವಾಣಿಯು ವಿಶ್ವಾಸಾರ್ಹತೆಗಾಗಿ ದೃಢವಾಗಿ ನಿಲ್ಲುತ್ತದೆ ಮತ್ತು ಜಗತ್ತಿನಲ್ಲಿ ದಾರಿದೀಪವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ಹೇಳಿದರು.

**********

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

**********

ಸಿಕ್ಕಿಂನ ಗ್ಯಾಂಗ್ಟಕ್‌ನಲ್ಲಿಂದು ನಡೆಯಲಿರುವ ಈಶಾನ್ಯ ಪ್ರದೇಶಕ್ಕಾಗಿ ವಿದ್ಯುತ್ ಸಚಿವರ ಸಮ್ಮೇಳನದಲ್ಲಿ ಕೇಂದ್ರ ವಿದ್ಯುತ್ ಸಚಿವ ಮನೋಹರ್ ಲಾಲ್ ಖಟ್ಟರ್ ಪಾಲ್ಗೊಳ್ಳಲಿದ್ದಾರೆ. ಈಶಾನ್ಯ ರಾಜ್ಯಗಳ ಎಲ್ಲಾ ವಿದ್ಯುತ್ ಸಚಿವರು, ಹಿರಿಯ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಪ್ರದೇಶದ ವಿದ್ಯುತ್ ಕ್ಷೇತ್ರಕ್ಕೆ ಸಂಬಂಧಿಸಿದ ಹಲವು ಅಂಶಗಳನ್ನು ಸಮ್ಮೇಳನದಲ್ಲಿ ಚರ್ಚಿಸಲಾಗುವುದು. ಬಳಿಕ ಕೇಂದ್ರ ಸಚಿವರು ಸಿಕ್ಕಿಂನಲ್ಲಿ ನಗರಾಭಿವೃದ್ಧಿ ಮತ್ತು ವಿದ್ಯುತ್ ಕ್ಷೇತ್ರದಲ್ಲಿ ನಡೆಯುತ್ತಿರುವ ಮತ್ತು ಪ್ರಾಸ್ತಾವಿತ ಅಭಿವೃದ್ಧಿ ಉಪಕ್ರಮಗಳನ್ನು ಮುಖ್ಯಮಂತ್ರಿ ಪ್ರೇಮ್‌ಸಿಂಗ್ ತಮಾಂಗ್ ಅವರೊಂದಿಗೆ ಪರಿಶೀಲಿಸಲಿದ್ದಾರೆ.

*****END*****